# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **145** |
| ಉತ್ತರಿಸಬೇಕಾದ ದಿನಾಂಕ | : | 05.07.2023 |
| ಉತ್ತರಿಸಬೇಕಾದ ಸಚಿವರು | : | ವಸತಿ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವಸತಿ ಯೋಜನೆಗಳಾವುವು; ಅವುಗಳು ಯಾವ ಇಲಾಖೆಯ ಸಹಯೋಗದಲ್ಲಿ ಅನುಷ್ಠಾನಗೊಳ್ಳುತ್ತಿದೆ; ವಸತಿ ಇಲಾಖೆಯ ವಿವಿಧ ಯೋಜನೆಗಳ ಮೂಲಕ ಮಸ್ತಾಶ್ರಯ, ನೆರೆ ಪರಿಹಾರ, ಬಸವ, ಅಂಬೇಡ್ಕರ್, ಪ್ರಧಾನಮಂತ್ರಿ, ದೇವರಾಜ ಅರಸು, ಸಮಾಜ ಕಲ್ಯಾಣ ಯೋಜನೆಗಳಲ್ಲಿ ಮನೆ ಮಂಜೂರಾತಿ ಮಾನದಂಡಗಳಲ್ಲಿ ಸ್ಪಷ್ಟತೆ ಇಲ್ಲದೆ ಮನೆಗಳು ಅರ್ಧದಲ್ಲಿಯೇ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;(ವಿವರ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವಸತಿ ಯೋಜನೆಗಳು ಈ ಕೆಳಕಂಡಂತಿವೆ :<br>**ರಾಜ್ಯ ಸರ್ಕಾರದ ಯೋಜನೆಗಳು :**<br>1. ಬಸವ ವಸತಿ ಯೋಜನೆ<br>2. ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ(ಗ್ರಾಮೀಣ & ನಗರ)<br>3. ದೇವರಾಜು ಅರಸು ವಸತಿ ಯೋಜನೆ(ಗ್ರಾಮೀಣ & ನಗರ)<br>4. ವಾಜಪೇಯಿ ನಗರ ವಸತಿ ಯೋಜನೆ<br>5. ಮುಖ್ಯ ಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ(ಬೆಂಗಳೂರು ಜಿಲ್ಲೆಯಲ್ಲಿ ಮಾತ್ರ)<br>**ಕೇಂದ್ರ ಪುರಸ್ಕೃತ ಯೋಜನೆಗಳು:**<br>1. ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾಮೀಣ)<br>2. ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ)<br><br>ಈ ಮೇಲ್ಕಂಡ ವಸತಿ ಯೋಜನೆಗಳನ್ನು ಹೊರತುಪಡಿಸಿ ಇತರೆ ಇಲಾಖಾ ಮನೆಗಳನ್ನು ಸಹ ದೇವರಾಜ ಅರಸು ವಸತಿ ಯೋಜನೆ ಹಾಗೂ ಡಾ\|\| ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಗಳಡಿ ಅನುಷ್ಠನಗೊಳಿಸಲಾಗುತ್ತಿದ್ದು, ವಿವರ ಇಂತಿದೆ.<br><br>• ಡಾ\|\| ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ನಿಯಮಿತ.<br>• ಕೈಮಗ್ಗ ಮತ್ತು ಜವಳಿ ಇಲಾಖೆ.<br>• ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ.<br>• ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ- ಮಾಜಿ ದೇವದಾಸಿಯರು.<br>• ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ-ಅಲೆಮಾರಿ/ಅರೆ ಅಲೆಮಾರಿ |

| | | |
|---|---|---|
| | | ಜನಾಂಗದವರು.<br>• ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ- ಅಲೆಮಾರಿ/ಅರೆ ಅಲೆಮಾರಿ ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಸಮುದಾಯದವರು.<br>• ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ- ಅಲೆಮಾರಿ ಜನಾಂಗದವರು.<br><br>ಮೇಲೆ ತಿಳಿಸಿರುವ ಇಲಾಖೆಗಳ ಫಲಾನುಭವಿಗಳ ಆಯ್ಕೆ ಮಾಡಿ ನಿಗಮದ ಆನ್‌ಲೈನ್‌ನಲ್ಲಿ ನಮೂದಿಸಲಾಗುವುದು.<br><br>ಮನೆಗಳ ಜಿಪಿಎಸ್‌ನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ ನಗರ ಸ್ಥಳೀಯ ಸಂಸ್ಥೆ ಅಧಿಕಾರಿಗಳ ಮಟ್ಟದಲ್ಲಿ ನಮೂದಿಲಾಗುತ್ತಿದ್ದು, ನಿಗಮದಿಂದ ಸದರಿ ಫೋಟೋಗಳನ್ನು ಪರಿಶೀಲಿಸಿ ಸರಿ ಇರುವ ಮನೆಗಳ ಫೋಟೋಗಳಿಗೆ ಆಧಾರ್ ಆಧಾರದ ಮೇಲೆ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು.<br><br>**ನೆರೆಸಂತ್ರಸ್ಥರ ಪುನರ್ವಸತಿ ಯೋಜನೆ:**<br>ರಾಜ್ಯದಲ್ಲಿ 2019, 2020, 2021 ಮತ್ತು 2022ನೇ ಸಾಲಿನಲ್ಲಿ ಉಂಟಾದ ಅತಿವೃಷ್ಟಿ/ಪ್ರವಾಹ/ಮಳೆಯಿಂದ ಹಾನಿಗೊಳಗಾದ ಮನೆಗಳ ಪುನರ್ವಸತಿ ಕಾರ್ಯವನ್ನು ಕಂದಾಯ ಇಲಾಖೆಯ ಒಟ್ಟಾರೆ ನಿಯಂತ್ರಣ ಮತ್ತು ಮೇಲ್ವಿಚಾರಣೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮವು ನೋಡಲ್ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. |
| ಆ) | ವಿವಿಧ ವಸತಿ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಪ್ರಾಧಿಕಾರ ಯಾವುದು; ವಸತಿ ಯೋಜನೆಯಡಿ ಪಡೆದ ಮನೆಯ ವಿವಿಧ ಹಂತದ ಛಾಯಾಚಿತ್ರ ಇಂದೀಕರಿಸುವ ಪ್ರಾಧಿಕಾರ ಯಾವುದು; ದಾಖಲಾತಿ ನಿರ್ವಹಣೆ ಮಾಡುವ ಪ್ರಾಧಿಕಾರ ಯಾವುದು; (ಯೋಜನೆವಾರು ಸಂಪೂರ್ಣ ವಿವರ ನೀಡುವುದು) | ಫಲಾನುಭವಿಗಳನ್ನು ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಗ್ರಾಮ ಸಭೆಯ ಮೂಲಕ ಹಾಗೂ ನಗರ ಪ್ರದೇಶದಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ನಗರ ಆಶ್ರಯ ಸಮಿತಿ ಮೂಲಕ ಮಾಡಲಾಗುತ್ತಿದೆ.<br><br>ಫಲಾನುಭವಿಗಳ ಮನೆ ನಿರ್ಮಾಣದ ಭೌತಿಕ ಪ್ರಗತಿಯನ್ನು ಗ್ರಾಮೀಣ ಪ್ರದೇಶದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಜಿ.ಪಿ.ಎಸ್. ಆಧಾರಿತ |

| | | |
|---|---|---|
| | | ಛಾಯಾಚಿತ್ರಗಳನ್ನು ಅಳವಡಿಸುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯತ್ ಹಾಗೂ ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಂದ ಫಲಾನುಭವಿವಾರು ದಾಖಲಾತಿಗಳನ್ನು ನಿರ್ವಹಿಸಲಾಗುತ್ತಿದೆ. |
| ಇ) | ವಿವಿಧ ವಸತಿ ಯೋಜನೆಗಳ ಅನುಷ್ಠಾನದಲ್ಲಿ ಆಯ್ಕೆ ಮಾಡುವ, ಛಾಯಾಚಿತ್ರ ಇಂದೀಕರಿಸುವ, ದಾಖಲಾತಿ ನಿರ್ವಹಿಸುವ ಪ್ರಾಧಿಕಾರ ಬೇರೆ ಬೇರೆಯಾಗಿರುವುದರಿಂದ ಗೊಂದಲವುಂಟಾಗಿ, ಕೆಲವೊಮ್ಮೆ ಗ್ರಾಮ ಸಭೆಗಳಲ್ಲಿ ಗಲಾಟೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸ್ವೀಕರಿಸಲಾದ ದೂರು ಹಾಗೂ ಸಲಹೆಗಳೆಷ್ಟು; ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಗ್ರಾಮೀಣ ಪ್ರದೇಶಕ್ಕೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿ ಮೂಲಕ ಹಾಗೂ ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಮೂಲಕ ಫಲಾನುಭವಿಗಳ ಆಯ್ಕೆ, ಮನೆ ನಿರ್ಮಾಣದ ಹಂತವಾರು ಛಾಯಾಚಿತ್ರ ಇಂದೀಕರಿಸುವಿಕೆ ಹಾಗೂ ದಾಖಲಾತಿಗಳನ್ನು ಸುಸೂತ್ರವಾಗಿ ನಿರ್ವಹಣೆ ಮಾಡಲಾಗುತ್ತಿದೆ. ಈ ಬಗ್ಗೆ ಗೊಂದಲ ಅಥವಾ ಗಲಾಟೆಗಳ ಬಗ್ಗೆ ಯಾವುದೇ ದೂರುಗಳನ್ನು ಸ್ವೀಕರಿಸಿರುವುದಿಲ್ಲ.<br><br>**ನೆರೆಸಂತ್ರಸ್ಥರ ಪುನರ್ವಸತಿ ಯೋಜನೆ:**<br>ನೆರೆಸಂತ್ರಸ್ಥರ ಪುನರ್ವಸತಿ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಹಾಗೂ ದಾಖಲಾತಿಗಳ ನಿರ್ವಹಣೆಯ ಸಂಪೂರ್ಣ ಜವಾಬ್ದಾರಿ ಕಂದಾಯ ಇಲಾಖೆಗೆ ಒಳಪಟ್ಟಿದ್ದು, ಜಿಪಿಎಸ್ ಛಾಯಾಚಿತ್ರಗಳನ್ನು ಇಂದೀಕರಿಸುವ ಜವಾಬ್ದಾರಿಯು ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ನಗರ ಸ್ಥಳೀಯಸಂಸ್ಥೆಗಳಿಗೆ ಸೇರಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ. ಯೋಜನೆಯ ನಿರ್ವಹಣೆ ಪ್ರಾಧಿಕಾರದಲ್ಲಿ ಗೊಂದಲ ಉಂಟಾಗಿರುವ ಬಗ್ಗೆ ನಿಗಮಕ್ಕೆ ಯಾವುದೇ ದೂರು ಸ್ವೀಕೃತವಾಗಿರುವುದಿಲ್ಲ. |
| ಈ) | ಗ್ರಾಮ ಪಂಚಾಯತಿಗಳ ಮೂಲಕ ನೇರವಾಗಿ ಅನುಷ್ಠಾನವಾಗುವ ವಸತಿ ಯೋಜನೆ ಹೊರತುಪಡಿಸಿ, ಉಳಿದಂತೆ ಗ್ರಾಮ ಸಭೆಯಿಂದ ಅರ್ಹ ವಸತಿರಹಿತ ಫಲಾನುಭವಿಗಳ ಪಟ್ಟಿಯನ್ನು ಪಡೆದು, ಉಳಿದ ಯೋಜನೆಗಳ ಆಯ್ಕೆ ಹಾಗೂ ದಾಖಲಾತಿ ನಿರ್ವಹಣೆ ಪ್ರಕ್ರಿಯೆಗಳ ಜವಾಬ್ದಾರಿಯನ್ನು ಆಯಾ ಇಲಾಖೆಗಳಿಗೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಈ ಬಗ್ಗೆ ಸರ್ಕಾರದ ನಿಲುವೇನು? (ಸಂಪೂರ್ಣ ದಾಖಲಾತಿಯೊಂದಿಗೆ | ಸರ್ಕಾರವು ಪ್ರತಿ ವರ್ಷ 14 ವಿಶೇಷ ವರ್ಗಗಳಿಗೆ ಸೇರಿದ ವಸತಿ ರಹಿತರಿಗೆ ದೇವರಾಜ ಅರಸು ವಸತಿ ಯೋಜನೆಯಡಿ ಮನೆಗಳನ್ನು ಮಂಜೂರು ಮಾಡಲಾಗುವುದು. ಸದರಿ ಗುರಿಗೆ ಅನುಗುಣವಾಗಿ ಜಿಲ್ಲೆಯ ಜಿಲ್ಲಾಧಿಕಾರಿಗಳು 14 ವಿಶೇಷ ವರ್ಗಕ್ಕೆ ಸೇರಿದ ನಿವೇಶನ ಹೊಂದಿರುವ ಫಲಾನುಭವಿಗಳನ್ನು ಆಯಾ ಜಿಲ್ಲೆಗೆ ನಿಗಧಿಯಾದ ಗುರಿಯ ಮಿತಿಯೊಳಗೆ ಜಿಲ್ಲಾ ಸಮಿತಿಯಲ್ಲಿ ಅನುಮೋದಿಸಿ ನಿಗಮಕ್ಕೆ ಗುರಿ ನಿಗಧಿಪಡಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಅದರಂತೆ ನಿಗಮವು ಆನ್‌ಲೈನ್ ನಲ್ಲಿ ಗುರಿ |

| | | |
|---|---|---|
| | ಮಾಹಿತಿ ನೀಡುವುದು) | ನಿಗಧಿಪಡಿಸಿ ಇತರೆ ವಸತಿ ಯೋಜನೆಯಂತೆ ಅನುಮೋದನೆ ಪಡೆದ ನಂತರ ಫಲಾನುಭವಿಗಳ ಆಧಾರ್ ಆಧಾರಿತ ಬ್ಯಾಂಕ್ ಖಾತೆಗೆ ಅನುದಾನ ಬಿಡುಗಡೆ ಮಾಡಿ ಅನುಷ್ಠಾನಗೊಳಿಸಲಾಗುವುದು.<br><br>**ಮುಂದುವರೆದು, ಈ ಕೆಳಕಂಡ ಇಲಾಖಾ ಮನೆಗಳನ್ನು ಸಹ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದ್ದು, ಇಲಾಖಾವಾರು ವಿವರ ಇಂತಿದೆ.**<br>1. ಡಾ|| ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ನಿಯಮಿತರಡಿ (ಲಿಡಕರ್) ವೃತ್ತಿ ನಿರತ ಚರ್ಮ ಕುಶಲಕರ್ಮಿಗಳಿಗೆ ವಸತಿ- ಕಾರ್ಯಾಗಾರ ಯೋಜನೆಯಡಿ ವಸತಿ ಸೌಕರ್ಯ ಕಲ್ಪಿಸುವುದು.<br>2. ಕೈಮಗ್ಗ ಮತ್ತು ಜವಳಿ ಇಲಾಖೆಯಡಿ ಬರುವ ನೇಕಾರ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸುವುದು.<br>3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ಅಲೆಮಾರಿ/ಅರೆ ಅಲೆಮಾರಿ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸುವುದು.<br>4. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿ ಬರುವ ದೇವದಾಸಿ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸುವುದು.<br>5. ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯಡಿ ಬರುವ ವಸತಿ ರಹಿತರಿಗೆ ಕುಶಲಕರ್ಮಿಗಳಿಗೆ ವಸತಿ ಸೌಕರ್ಯ ಕಲ್ಪಿಸುವುದು.<br><br>ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯಡಿ<br><br>6. ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಲೆಮಾರಿ/ಅರೆ ಅಲೆಮಾರಿ ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಸಮುದಾಯಕ್ಕೆ |

| | | |
|---|---|---|
| | | ಸೇರಿದ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸುವುದು.<br>7. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಲೆಮಾರಿ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸುವುದು.<br><br>ಹೀಗೆ ಈ ಮೇಲ್ಕಂಡ 7 ಇಲಾಖೆಗಳಡಿ ಬರುವ ಅರ್ಹ ವಸತಿ ರಹಿತರನ್ನು ಆಯಾ ಇಲಾಖೆಗಳೇ ವಸತಿ ರಹಿತರಿಂದ ಅವಶ್ಯ ಮಾಹಿತಿ/ದಾಖಲಾತಿಗಳನ್ನು ಪಡೆದು ಫಲಾನುಭವಿಗಳನ್ನು ಆಯ್ಕೆಮಾಡಿ ಅನುಮೋದಿಸಿ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ.<br><br>ಹೀಗೆ ಫಲಾನುಭವಿಗಳನ್ನು ಆಯ್ಕೆ/ಅನುಮೋದನೆಯ ಪ್ರಕ್ರಿಯೆಯನ್ನು ನಿರ್ವಹಿಸಲು ಅವಶ್ಯವಿರುವ User ID & Pass Word ಅನ್ನು ರಾಜೀವ್ ಗಾಂಧಿ ವಸತಿ ನಿಗಮದಿಂದ ಸಂಬಂಧಪಟ್ಟ ಇಲಾಖೆಗಳಿಗೆ ಒದಗಿಸಲಾಗಿರುತ್ತದೆ.<br><br>ಮುಂದುವರೆದು, ಇಲಾಖೆಗಳಿಂದ ಅನುಮೋದನೆಗೊಂಡು ಪ್ರಗತಿಯಲ್ಲಿರುವ ಮನೆಗಳ ಜಿ.ಪಿ.ಎಸ್ ಹಂತವಾರು ಛಾಯಾಚಿತ್ರಕ್ಕೆ ರಾಜೀವ್ ಗಾಂಧಿ ವಸತಿ ನಿಗಮದಿಂದ ಪರಿಶೀಲಿಸಿ ಓಕೆ-ಯಾದ ಫಲಾನುಭವಿಗಳ ಆಧಾರ್ ಆಧಾರಿತ ಬ್ಯಾಂಕ್ ಖಾತೆಗೆ ಅನುದಾನ ಬಿಡುಗಡೆ ಮಾಡುವ ಪ್ರಕ್ರಿಯೆ ಮಾತ್ರ ನಿಗಮದಿಂದ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ವಇ 163 ಹೆಚ್‌ಎಂ 2023

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು